ಓಎಸ್ 79/2018
ಡಿಡಬ್ಲ್ಯೂ-1

ದಿನಾಂಕ 17.09.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ- ವಾದಿ ಪರ ವಕೀಲರಿಂದಃ-**

ನಮ್ಮ ಕುಟುಂಬದಲ್ಲಿ ಕುಟುಂಬದ ಸದಸ್ಯರ ನಡುವೆ ನೋಂದಾಯಿತ ವಿಭಾಗ ಪತ್ರವಾಗಿರುವುದಿಲ್ಲ. ಕುಟುಂಬದ ಸದಸ್ಯರು ಅವರ ಅನುಕೂಲಕ್ಕೆ ತಕ್ಕಂತೆ ಕುಟುಂಬದ ಸ್ವತ್ತುಗಳ ಸ್ವಾಧೀನಾನುಭವದಲ್ಲಿದ್ದಾರೆ. ನಾನು ವಿರಾಜಪೇಟೆಯ ಹೆಚ್ಚುವರಿ ಕಿರಿಯ ಶ್ರೇಣಿ ನ್ಯಾಯಾಲಯದಲ್ಲಿ ಅಸಲು ದಾವಾ ಸಂಖ್ಯೆ 93/2018 ನ್ನು ಕಾವೇರಪ್ಪರವರ ವಿರುದ್ದ ದಾಖಲಿಸಿರುತ್ತೇನೆ ಎಂದರೆ ಸರಿ. ಕಾವೇರಪ್ಪರವರು ನಮ್ಮ ಕುಟುಂಬಕ್ಕೆ ಸೇರಿದವರು. ನಾನು ವಾದಿಗೆ ಸೇರಿದ ಆಸ್ತಿಯನ್ನು ಅವರಿಗೆ ಬಿಟ್ಟುಕೊಡದೇ ತೊಂದರೆ ಕೊಡುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ವಾದಿಗೆ ಸೇರಿದ ಸ್ವತ್ತಿಗೆ ಸಂಬಂಧಿಸಿದಂತೆ ಅನಧಿಕೃತವಾಗಿ ಪಹಣಿಯನ್ನು ನನ್ನ ಹೆಸರಿಗೆ ಸರ್ವೆ ನಂ. 137/8 ಎಂದು ಮಾಡಿಸಿಕೊಂಡು ಅವರಿಗೆ ತೊಂದರೆ ಕೊಡುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲಃ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ)

ಸಹಿ
ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.

ಓಎಸ್ 79/2018
ಡಿಡಬ್ಲ್ಯೂ-1